# ಆಪರೇಷನ್ ಕಮಲ ಆಮಿಷ ತನಿಖೆಗೆ ಅಸ್ತು

ಬೆಂಗಳೂರು: ಆಪರೇಷನ್ ಕಮಲಕ್ಕಾಗಿ ಸಿಎಂ ಬಿ.ಎಸ್. ಯಡಿಯೂರಪ್ಪ ಅವರು ಆಮಿಷ ಒಡ್ಡಿದ್ದಾರೆ ಎಂಬ ಪ್ರಕರಣಕ್ಕೆ ಸಂಬಂಧಿಸಿದಂತೆ ಅವರ ವಿರುದ್ಧ ತನಿಖೆ ಮುಂದುವರಿಸಲು ಹೈಕೋರ್ಟ್ ಅಸ್ತು ಎಂದಿದೆ.ಇನ್ನೊಂದೆಡೆ ಶಾಸಕರೊಬ್ಬರಿಗೆ 5 ಕೋಟಿ ರೂ. ಆಮಿಷಕ್ಕೆ ಸಂಬಂಧಿಸಿ ಇಬ್ಬರು ಸಚಿವರ ವಿರುದ್ಧ ಕ್ರಿಮಿನಲ್ ಮೊಕದ್ದಮೆಗೆ ಕೋರ್ಟ್ ಆದೇಶಿಸಿದೆ.

ಗುರುಮಠಕಲ್ ಶಾಸಕ ನಾಗನಗೌಡ ಕಂದಕೂರು ಪುತ್ರ ಶರಣಗೌಡ ಕಂದಕೂರು, 'ಜೆಡಿಎಸ್ ಬಿಟ್ಟು ಬಿಜೆಪಿ ಸೇರಲು ಬಿಎಸ್ ಯಡಿಯೂರಪ್ಪ, ಶಿವನಗೌಡ ನಾಯಕ್, ಪ್ರೀತಮ್ ಗೌಡ, ಎಂ.ಬಿ. ಮರಮಠಕಲ್ ಆಮಿಷ ಒಡ್ಡಿದ್ದರು' ಎಂದು ದೇವದುರ್ಗ ಠಾಣೆಗೆ ಎರಡು ವರ್ಷ ಹಿಂದೆ ದೂರು ನೀಡಿದ್ದರು. ಈ ಹಿನ್ನೆಲೆಯಲ್ಲಿ ದೇವದುರ್ಗ ಠಾಣೆಯಲ್ಲಿ ಇವರ ಮೊಕದ್ದಮೆ ದಾಖಲಾಗಿತ್ತು.



ಬಳಿಕ ಕಲಬುರಗಿ ಹೈಕೋರ್ಟ್ ಪೀಠದ ಮೊರೆಹೋಗಿದ್ದ ಸಿಎಂ ತನಿಖೆಗೆ ತಡೆಯಾಜ್ಞೆ ತಂದಿದ್ದರು. ಇದರ ತೆರವಿಗಾಗಿ ಶರಣಗೌಡ ಹೈಕೋರ್ಟ್‌ಗೆ ಸಲ್ಲಿಸಿದ್ದ ಅರ್ಜಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಪ್ರಕರಣ ವರ್ಗಾವಣೆ ಮಾಡಿತ್ತು. ಇದೀಗ ತಡೆಯಾಜ್ಞೆ ತೆರವುಗೊಳಿಸಿದ ಹೈಕೋರ್ಟ್ ನ್ಯಾಯಮೂರ್ತಿ ಜಾನ್ ಮೈಕಲ್ ಡಿ ಕುನ್ಹಾ ಪೀಠ ಪೊಲೀಸ್ ತನಿಖೆಗೆ ಸಮ್ಮತಿ ಸೂಚಿಸಿದೆ. ಇದೇ ವೇಳೆ ಪ್ರಕರಣ ರದ್ದು ಕೋರಿ ಬಿ.ಎಸ್.ಯಡಿಯೂರಪ್ಪ ಸಲ್ಲಿಸಿದ್ದ ಅರ್ಜಿಯನ್ನೂ ವಜಾಗೊಳಿಸಿದೆ.

ಈ ಮೂಲಕ ಪ್ರಕರಣದ ತನಿಖೆಗೆ ಹಾದಿ ಸುಗಮವಾದಂತಾಗಿದೆ. ಜತೆಗೆ ಮುಖ್ಯಮಂತ್ರಿಗಳಿಗೆ ಮತ್ತೊಂದು ಸಂಕಷ್ಟ ಎದುರಾಗಿದೆ. ಕೋಲಾರದ ಶಾಸಕ ಶ್ರೀನಿವಾಸಗೌಡ ಅವರಿಗೆ ಪಕ್ಷ ಸೇರಲು 5 ಕೋಟಿ ರೂ ಆಮಿಷವೊಡ್ಡಿದ್ದ ಪ್ರಕರಣ ಸಂಬಂಧ ಟಿ.ಜೆ,.ಅಬ್ರಹಾಂ ಸಲ್ಲಿಸಿದ್ದ ಅರ್ಜಿ ಪರಿಗಣಿಸಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಸಚಿವರಾದ ಡಾ.ಅಶ್ವಥ್‌ನಾರಾಯಣ, ಸಿ.ಪಿ.ಯೋಗೀಶ್ವರ್ ಮತ್ತು ಶಾಸಕ ಎಸ್.ಆರ್. ವಿಶ್ವನಾಥ್ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ತನಿಖೆ ನಡೆಸುವಂತೆ ಆದೇಶಿಸಿದೆ.